# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:21.09.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.17 (ಜೆ ಪಿ ಪಾರ್ಕ್) ರಲ್ಲಿ ಶ್ರೀ. ವೆಂಕಟೇಶ್ (ಕಾರ್ಯಪಾಲಕ ಅಭಿಯಂತರರು, ಟಿವಿಸಿಸಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು:-

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ವೆಂಕಟೇಶ್ | ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು |
| 3 | ಶ್ರೀ ರಮೇಶ್ | ಹಿ. ಆ. ಪ. |
| 4 | ಶ್ರೀ ಅವಿನಾಶ್ | ಬಿಡಬ್ಲ್ಯೂಎಸ್ಎಸ್ಬಿ |
| 5 | ಶ್ರೀ ಆಶೀರ್ವಾದ | 17/ಬಿ. ಮೇಲ್ವಿಚಾರಕರು |
| 6 | ಶ್ರೀ ಎಂ. ಸಿ. ವಿಲ್ಸನ್ | ಮೇಲ್ವಿಚಾರಕರು |
| 7 | ಶ್ರೀ ವೆಂಕಟೇಶ್ | ಮೇಲ್ವಿಚಾರಕರು |
| 8 | ಬಸವರಾಜು | ವಾರ್ಡ್-17/ಸಿ ಮೇಲ್ವಿಚಾರಕರು |
| 9 | ಶ್ರೀ ಮುರಳಿ | ಮೇಲ್ವಿಚಾರಕರು |
| 10 | ನಾಗೇಗೌಡ | ಮೇಲ್ವಿಚಾರಕರು |
| 11 | ಅಲಿಸ್ಟರ್ | ಮೇಲ್ವಿಚಾರಕರು |
| | ಹಾಗೂ ಇತರೆ ಸಾರ್ವಜನಿಕರು ಹಾಜರಿದ್ದರು | |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1) ಘನತ್ಯಾಜ್ಯ ನಿರ್ವಹಣೆ :

ಮೇಲ್ವಿಚಾರಕರು ಮಾತನಾಡಿ. ವಾರ್ಡ್‌ನ ವಿವಿಧ ಭಾಗಗಳಲ್ಲಿ ಬ್ಲ್ಯಾಕ್‌ಸ್ಪಾಟ್‌ಗಳು ಹೆಚ್ಚಾಗುತ್ತಿರುವುದನ್ನು ತಡೆಯುವ ಸಲುವಾಗಿ, ಬ್ಲ್ಯಾಕ್‌ಸ್ಪಾಟ್‌ಗಳಲ್ಲಿ ಕಸ ಹಾಕುವವರಿಗೆ ದಂಡವಿಧಿಸುವ ಬಗ್ಗೆ ನಾಮಫಲಕ ಅಳವಡಿಸಲು ಕೋರಿದ್ದು, ಇದರ ಬಗ್ಗೆ ಅಧ್ಯಕ್ಷರು ಕಿರಿಯ ಆರೋಗ್ಯ ಪರಿವೀಕ್ಷಕರೊಂದಿಗೆ ಚರ್ಚಿಸಿ, ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸುವುದಾಗಿ ಸಭೆಗೆ ತಿಳಿಸಿದರು.

(ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರಿಗೆ ತುರ್ತು ಕ್ರಮಕ್ಕಾಗಿ)

Scanned with CamScanner

**2) ಬಿಬಿಎಂಪಿ ಅರಣ್ಯ ಇಲಾಖೆ:**

ಕಳೆದ ಸಭೆಯಲ್ಲಿ ಚರ್ಚಿಸಿದಂತೆ, 2ನೇ ಅಡ್ಡರಸ್ತೆ, ಹೆಚ್.ಎಂ.ಟಿ. ಬಡಾವಣೆ, ಸುಮತಿ ನರ್ಸಿಂಗ್ ಹೋಮ್ ಹತ್ತಿರುವ ಇರುವ ಮರವು ಬೀಳುವ ಹಂತದಲ್ಲಿದ್ದು, ಅದನ್ನು ಬಿಬಿಎಂಪಿ ಅರಣ್ಯ ಇಲಾಖೆಯವರು ತೆರವುಗೊಳಿಸಿರುತ್ತಾರೆ.

**3) ಕಾಮಗಾರಿ ಇಲಾಖೆ :**

ವಾರ್ಡ್‌ನಲ್ಲಿ ಕೆಲವೊಂದು ಕಡೆ ಚಿಕ್ಕದಾಗಿ ಡೆಬ್ರಿಸ್ ಕಂಡುಬಂದಿದ್ದು, ಅದನ್ನು ಕೂಡಲೇ ತೆರವುಗೊಳಿಸಬೇಕೆಂದು ಸಹಾಯಕ ಅಭಿಯಂತರರು ಅಧ್ಯಕ್ಷರಿಗೆ ತಿಳಿಸಿದರು.

**4) ಮಾಸ್ಕ್ ಹಾಕದಿರುವ ವ್ಯಕ್ತಿಗಳಿಗೆ ದಂಡ ವಿಧಿಸುವ ಬಗ್ಗೆ:-**

ಪ್ರಸ್ತಾಪಿತ ವಿಷಯದ ಬಗ್ಗೆ ಮಾರ್ಷಲ್‌ಗಳೊಂದಿಗೆ ಚರ್ಚಿಸಲಾಗಿದ್ದು, ಮಾಸ್ಕ್ ಹಾಕದೇ ತಿರುಗಾಡುವ ಸಾರ್ವಜನಿಕರಿಗೆ ದಂಡ ವಿಧಿಸಲು ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಸುತ್ತೋಲೆ ಹೊರಡಿಸಿರುತ್ತದೆ. ಮಾರ್ಷಲ್‌ಗಳು ಅದರಂತೆ, ಕ್ರಮ ಕೈಗೊಂಡು ಮಾಸ್ಕ್ ಹಾಕದಿರುವ ಸಾರ್ವಜನಿಕರಿಗೆ ಸರ್ಕಾರದ ಆದೇಶದ ರೀತ್ಯಾ ಕಟ್ಟುನಿಟ್ಟಾಗಿ ದಂಡ ವಿಧಿಸಲು ಅಧ್ಯಕ್ಷರು ಸಭೆಯಲ್ಲಿ ತಿಳಿಸಿದರು.

(ಸಂಬಂಧಪಟ್ಟ ವಾರ್ಡ್-17ರ ವಾರ್ಡ್ ಮಾರ್ಷಲ್‌ರವರಿಗೆ ತುರ್ತು ಕ್ರಮಕ್ಕಾಗಿ)

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:17

(ವೆಂಕಟೇಶ್)
ಕಾರ್ಯಪಾಲಕ ಅಭಿಯಂತರರು ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:17

Scanned with CamScanner